Start implementing immediately
25.06.21

102792/2021

25/6

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೋವಿಡ್-19 ಕಾರಣದಿಂದ ಬಾಧಿತರಾದ ಮಕ್ಕಳ ಸಲುವಾಗಿ ಬಾಲ ಸೇವಾ ಯೋಜನೆಯನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ:ಕರಾಮಸೊ/ ಕೋವಿಡ್/ಮರ /40/2021-22 ದಿನಾಂಕ:05.06.2021

P.D.

**ಪ್ರಸ್ತಾವನೆ:**

ಮೇಲೆ ಓದಲಾದ ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು, ಇವರ ಪ್ರಸ್ತಾವನೆಯಲ್ಲಿ, ದೇಶದಲ್ಲಿ ಕೋವಿಡ್-19 ಸೋಂಕು ಪ್ರಾರಂಭವಾಗಿದ್ದು, ಸಾವು ನೋವು ಹೆಚ್ಚಾಗಿ ಸಂಭವಿಸುತ್ತಿದೆ. ಕೆಲವು ಮಕ್ಕಳು ಪಾಲಕರನ್ನು ಕಳೆದುಕೊಳ್ಳುತ್ತಿದ್ದು, ತಂದೆ-ತಾಯಿ ಇಬ್ಬರನ್ನೂ ಕಳೆದುಕೊಂಡಂತಹ 18 ವರ್ಷದ ಒಳಗಿನ ಮಕ್ಕಳಿಗೆ ರಕ್ಷಣೆ ನೀಡಿ, ಪಾಲನೆ ಆರೈಕೆ ಒದಗಿಸಿ ಅವರ ಸರ್ವತೋಮುಖ ಬೆಳವಣಿಗೆಗೆ ಅಗತ್ಯವಾದ ಸೌಕರ್ಯಗಳನ್ನು ಒದಗಿಸುವುದು ಬಾಲನ್ಯಾಯ ಕಾಯ್ದೆ ಅಡಿಯಲ್ಲಿ ಶಾಸನ ಬದ್ಧತೆಯಾಗಿರುತ್ತದೆ. ಕೋವಿಡ್-19 ಕಾರಣದಿಂದ ಪೋಷಕರಿಬ್ಬರನ್ನೂ ಕಳೆದುಕೊಂಡು ವಿಸ್ತೃತ ಕುಟುಂಬದ ಸದಸ್ಯರ ಆರೈಕೆಯಲ್ಲಿರುವ ಮಕ್ಕಳಿಗೆ ಪ್ರತಿ ತಿಂಗಳು ರೂ.3500/- ಧನಸಹಾಯವನ್ನು ಈ ಮಕ್ಕಳ ಸಮಗ್ರ ರಕ್ಷಣೆ ಮತ್ತು ಪಾಲನೆಗಾಗಿ ಮುಖ್ಯ ಮಂತ್ರಿ ಬಾಲ ಸೇವಾ ಯೋಜನೆಯಡಿಯಲ್ಲಿ ನೀಡುವುದಾಗಿ ಮಾನ್ಯ ಮುಖ್ಯ ಮಂತ್ರಿಗಳು ಘೋಷಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ,

1. ಕೇಂದ್ರ ಸರ್ಕಾರದಿಂದ ಈಗಾಗಲೇ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯಡಿಯಲ್ಲಿ ಪ್ರಾಯೋಜಕತ್ವ ಕಾರ್ಯಕ್ರಮದಡಿ ನೀಡಲಾಗುತ್ತಿರುವ ಯೋಜನೆಯನ್ನು ಕೋವಿಡ್-19 ಕಾರಣದಿಂದ ಪೋಷಕರಿಬ್ಬರನ್ನೂ ಕಳೆದುಕೊಂಡ ಮಕ್ಕಳಿಗೂ ವಿಸ್ತರಿಸುವುದು.

2. ಕೇಂದ್ರ ಪುರಸ್ಕೃತ ಪ್ರಾಯೋಜಕತ್ವ ಕಾರ್ಯಕ್ರಮದಡಿ ಒಂದು ಫಲಾನುಭವಿ ಮಗುವಿಗೆ ಒಂದು ತಿಂಗಳಿಗೆ ರೂ.2000/- ಸಹಾಯಧನ ಗರಿಷ್ಠ 3 ವರ್ಷಗಳಿಗೆ ಒದಗಿಸಲಾಗುತ್ತಿದೆ. ಇದರಲ್ಲಿ ಕೇಂದ್ರದ ಪಾಲು ರೂ.1200/- ಹಾಗೂ ರಾಜ್ಯದ ಪಾಲು ರೂ.800/- ಭರಿಸಲು ಅವಕಾಶವಿದೆ. ಸದರಿ ಕಾರ್ಯಕ್ರಮವನ್ನು ಕೋವಿಡ್ -19 ಕಾರಣದಿಂದ ಪೋಷಕರಿಬ್ಬರನ್ನೂ ಕಳೆದುಕೊಂಡ ಮಕ್ಕಳಿಗೆ 18 ವರ್ಷ ತುಂಬುವವರೆಗೂ ಅನ್ವಯವಾಗುವಂತೆ ವಿಸ್ತರಿಸಲು ಹಾಗೂ ಇದಕ್ಕೆ ರಾಜ್ಯ ಸರ್ಕಾರದಿಂದ ರೂ.1500/- ಹೆಚ್ಚುವರಿಯಾಗಿ ಭರಿಸಿ ಬಾಲ ಸೇವಾ ಯೋಜನೆ ಅಡಿಯಲ್ಲಿ ಕಾರ್ಯಕ್ರಮ ಅನುಷ್ಠಾನಗೊಳಿಸುವುದು.

3. ಸದರಿ ಕಾರ್ಯಕ್ರಮಕ್ಕೆ 2021-22ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ:2235-02-102-0-36(103) (ಸಿಎಸ್‌ಎಸ್) ಅಡಿಯಲ್ಲಿ ರಾಜ್ಯ ಸರ್ಕಾರದ ಪಾಲು ವಾರ್ಷಿಕ ರೂ.45,00,000/-ಗಳ ಹೆಚ್ಚುವರಿ ಅಗತ್ಯವಿದೆ. ಈ ಮೊತ್ತವನ್ನು 2021-22ನೇ ಸಾಲಿನಲ್ಲಿ ಈಗಾಗಲೇ ಒದಗಿಸಲಾಗಿರುವ ಅನುದಾನದಿಂದ ಭರಿಸಲಾಗುವುದು.

4. ಎಸ್.ಎಸ್.ಎಲ್.ಸಿ ಪೂರೈಸಿದ ಮಕ್ಕಳಿಗೆ ಉನ್ನತ ಶಿಕ್ಷಣ ಮತ್ತು ಕೌಶಲ್ಯ ಅಭಿವೃದ್ಧಿಗಾಗಿ ಲ್ಯಾಪ್ ಟಾಪ್ ಮತ್ತು ಟ್ಯಾಬ್ ವಿತರಣೆಗಾಗಿ ರಾಜ್ಯವಲಯ ಯೋಜನೆಯನ್ನು ಅನುಷ್ಠಾನ ಮಾಡುತ್ತಿರುವ ಲೆಕ್ಕ ಶೀರ್ಷಿಕೆ 2235-02-102-0-33(103)ರಡಿ 2021-22ನೇ ಸಾಲಿನಲ್ಲಿ ರೂ.17,50,000/-ಗಳ ಅಗತ್ಯವಿದ್ದು ಈ ಮೊತ್ತವನ್ನು 2021-22ನೇ ಸಾಲಿನಲ್ಲಿ ಈಗಾಗಲೇ ಒದಗಿಸಲಾಗಿರುವ ಅನುದಾನದಿಂದ ಭರಿಸಲಾಗುವುದು

5. ಕೋವಿಡ್-19 ಕಾರಣದಿಂದ ಪೋಷಕರಿಬ್ಬರನ್ನೂ ಕಳೆದುಕೊಂಡ ಹೆಣ್ಣು ಮಕ್ಕಳಿಗೆ 21ವರ್ಷ ತುಂಬಿದ ನಂತರ ವಿವಾಹ, ಉನ್ನತ ಶಿಕ್ಷಣ ಮತ್ತು ಸ್ವಯಂ ಉದ್ಯೋಗ ಉದ್ದೇಶಗಳಿಗಾಗಿ ತಲಾ ರೂ.1.00ಲಕ್ಷ ಆರ್ಥಿಕ ಧನಸಹಾಯವನ್ನು ನೀಡಲು ರಾಜ್ಯವಲಯ ಯೋಜನೆಯನ್ನು ಅನುಷ್ಠಾನ ಮಾಡಲು 2021-22ನೇ ಸಾಲಿನಲ್ಲಿ ಫಲಾನುಭವಿಗಳು ಇಲ್ಲದೇ ಇರುವುದರಿಂದ ಹೆಚ್ಚುವರಿ ಅನುದಾನ ಅವಶ್ಯಕತೆ ಇರುವುದಿಲ್ಲ. ಆದುದರಿಂದ ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2235-02-102-0-33 ಉಪ ಶೀರ್ಷಿಕೆ 103ರಡಿ ಭರಿಸಲಾಗುವುದು ಎಂದು ತಿಳಿಸಿರುತ್ತಾರೆ.

ಈಗಾಗಲೇ ಮಾನ್ಯ ಮುಖ್ಯ ಮಂತ್ರಿಯವರು ಘೋಷಿಸಿರುವ ಮೇರೆಗೆ ಬಾಲ ಸೇವಾ ಯೋಜನೆಯ ಅನುಷ್ಠಾನಕ್ಕಾಗಿ ಮಾರ್ಗಸೂಚಿಗಳನ್ನು ಸಿದ್ದಪಡಿಸಿದ್ದು ಅದರಂತೆ ಯೋಜನೆಯನ್ನು **"ಮುಖ್ಯ ಮಂತ್ರಿ ಬಾಲ ಸೇವಾ ಯೋಜನೆ"** ಎಂದು ಹೆಸರಿಸಿ, ಈ ಯೋಜನೆಯನ್ನು ಮಕ್ಕಳ ರಕ್ಷಣಾ ನಿರ್ದೇಶನಾಲಯದ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಸೊಸೈಟಿಯ ಮೂಲಕ ಅನುಷ್ಠಾನ ಮಾಡಲು ಪ್ರಸ್ತಾಪಿಸುತ್ತಾ ಈ ಕಾರ್ಯಕ್ರಮಕ್ಕೆ ಆಡಳಿತಾತ್ಮಕ ಅನುಮೋದನೆ ಮತ್ತು ಇದಕ್ಕೆ ಅಗತ್ಯವಿರುವ ಒಟ್ಟು ರೂ.62,50,000/-ಗಳನ್ನು 2021-22ನೇ ಸಾಲಿನಲ್ಲಿ ಈಗಾಗಲೇ ಒದಗಿಸಿರುವ ಅನುದಾನದಿಂದ ಭರಿಸಲು ಅನುಮತಿ ನೀಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

/102792/2021

**ಸರ್ಕಾರಿ ಆದೇಶ ಸಂಖ್ಯೆ: ಮಮಇ 65 ಮಭಾಬ 2021, ಬೆಂಗಳೂರು, ದಿನಾಂಕ:25.06.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೋವಿಡ್-19 ಕಾರಣದಿಂದ ಪೋಷಕರಿಬ್ಬರನ್ನೂ ಕಳೆದುಕೊಂಡು, ವಿಸ್ತತ ಕುಟುಂಬದ ಸದಸ್ಯರ ಆರೈಕೆಯಲ್ಲಿರುವ 18 ವರ್ಷದ ಒಳಗಿನ ಮಕ್ಕಳಿಗೆ, ರಕ್ಷಣೆ ನೀಡಿ, ಪಾಲನೆ ಆರೈಕೆ ಒದಗಿಸಿ, ಅವರ ಸರ್ವತೋಮುಖ ಬೆಳವಣಿಗೆಗೆ ಅಗತ್ಯವಾದ ಸೌಕರ್ಯಗಳನ್ನು ಒದಗಿಸಲು, ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳಿಗೆ ನಿಗದಿಪಡಿಸಿ ಆದೇಶದೊಂದಿಗೆ ಲಗತ್ತಿಸಿರುವ ಮಾರ್ಗಸೂಚಿರನ್ವಯ **"ಮುಖ್ಯ ಮಂತ್ರಿ ಬಾಲ ಸೇವಾ ಯೋಜನೆ"** ಯನ್ನು ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಸೊಸೈಟಿಯ ಮೂಲಕ ಅನುಷ್ಠಾನ ಮಾಡಲು ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ.

ಈ ಯೋಜನೆಯಡಿ ಹಾಲಿ ಪ್ರಸ್ತಾಪಿಸಿರುವ ಕಾರ್ಯಕ್ರಮಗಳಿಗೆ 2021-22ನೇ ಸಾಲಿನಲ್ಲಿ ಅಗತ್ಯವಿರುವ ಒಟ್ಟು ರೂ.62.50ಲಕ್ಷಗಳು (ಅರವತ್ತೆರಡು ಲಕ್ಷ ಐವತ್ತು ಸಾವಿರಗಳು ರೂಪಾಯಿಗಳು ಮಾತ್ರ) ಲೆಕ್ಕಶೀರ್ಷಿಕೆ:2235-02-102-0-36(103)ರಡಿಯಲ್ಲಿ ರೂ.45.00ಲಕ್ಷಗಳು ಹಾಗೂ ಲೆಕ್ಕಶೀರ್ಷಿಕೆ:2235-02-102-0-33 ಉಪ ಶೀರ್ಷಿಕೆ:103ರಡಿ ರೂ.17.50ಲಕ್ಷಗಳನ್ನು ಭರಿಸುವುದು. 2021-22ನೇ ಸಾಲಿನಲ್ಲಿ ಈಗಾಗಲೇ ಒದಗಿಸಿರುವ ಅನುದಾನದಿಂದ ಭರಿಸಲು ಅನುಮತಿ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 29 ವೆಚ್ಚ-10 2021, ದಿನಾಂಕ:10.06.2021ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ಭಾಗ್ಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-3(ಪ್ರ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ(ಡಿ ಶಾಖೆ).

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು
4. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು.
5. ನಿರ್ದೇಶಕರು/ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನ ಸೌಧ, ಬೆಂಗಳೂರು.
8. ಉಪ ನಿರ್ದೇಶಕರು, ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

# ಕೋವಿಡ್-19 ಕಾರಣಗಳಿಂದ ಪೋಷಕರಿಬ್ಬರನ್ನೂ ಕಳೆದುಕೊಂಡ ಮಕ್ಕಳ ಸಮಗ್ರ ಪಾಲನೆ ಮತ್ತು ರಕ್ಷಣೆಗೆ "ಮುಖ್ಯಮಂತ್ರಿ ಬಾಲ ಸೇವಾ ಯೋಜನೆ"ಯ ಮಾರ್ಗ ಸೂಚಿಗಳು

## I. ಹಿನ್ನೆಲೆ ಮತ್ತು ಉದ್ದೇಶ:-

ದೇಶದಲ್ಲಿ ಕೋವಿಡ್-19 ಸೋಂಕು 2019-20ನೇ ಸಾಲಿನಿಂದ ಪ್ರಾರಂಭವಾಗಿದ್ದು, ಸೋಂಕು ಪ್ರಸರಣ ಉಲ್ಬಣವಾಗುತ್ತಿರುವ ಹಿನ್ನೆಲೆಯಲ್ಲಿ ಹೆಚ್ಚಿನ ಸಾವು ನೋವುಗಳು ಸಂಭವಿಸುತ್ತಿವೆ. ಕೋವಿಡ್-19 ಸಾಂಕ್ರಾಮಿಕದಿಂದ ಪಾಲಕರು ತೀರಿಕೊಳ್ಳುತ್ತಿದ್ದು, ಮಕ್ಕಳ ಭವಿಷ್ಯ ಅನಿಶ್ಚಿತವಾಗುತ್ತಿರುವ ಹಿನ್ನೆಲೆಯಲ್ಲಿ ಕೋವಿಡ್-19ರಿಂದ ತಂದೆ-ತಾಯಿ ಇಬ್ಬರನ್ನೂ ಕಳೆದು ಕೊಂಡಂತಹ 18 ವರ್ಷ ಒಳಗಿನ ಮಕ್ಕಳಿಗೆ ರಕ್ಷಣೆ ನೀಡಿ, ಪಾಲನೆ ಆರೈಕೆ ಒದಗಿಸಿ ಅವರ ಸರ್ವತೋಮುಖ ಬೆಳವಣಿಗೆಗೆ ಅಗತ್ಯವಾದ ಸೌಕರ್ಯಗಳನ್ನು ಒದಗಿಸುವುದು ಬಾಲನ್ಯಾಯ ಕಾಯ್ದೆ ಅಡಿಯಲ್ಲಿ ಶಾಸನಬದ್ದ ಬದ್ದತೆಯಾಗಿರುತ್ತದೆ ಹಾಗೂ ಇದು ಸರ್ಕಾರದ ಆದ್ಯತೆಯು ಸಹ ಆಗಿರುತ್ತದೆ.

## II. ಯೋಜನೆಯ ಅನುಷ್ಠಾನ:-

ಈ ಯೋಜನೆಯು ಮಕ್ಕಳ ರಕ್ಷಣಾ ನಿರ್ದೇಶನಾಲಯದ ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಮೂಲಕ ಅನುಷ್ಠಾನಗೊಳಿಸಲಾಗುವುದು ಹಾಗೂ ಆದೇಶದ ದಿನಾಂಕದಿಂದ ಜಾರಿಗೆ ಬರುತ್ತದೆ.

## III. ಯೋಜನೆಯ ಫಲಾನುಭವಿಗಳು

1. ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ, 2015 ಕಲಂ 2(12)ರ ಪ್ರಕಾರ ಮಗು ಎಂದರೆ 18 ವರ್ಷದ ಒಳಗಿನವರು ಆಗಿರತಕ್ಕದ್ದು. ಆದ್ದರಿಂದ ಇಬ್ಬರೂ ಪೋಷಕರಲ್ಲಿ ಎರಡನೆಯ ಪೋಷಕರು ತೀರಿಕೊಂಡ ದಿನಾಂಕಕ್ಕೆ 18 ವರ್ಷದ ಒಳಗಿನ ಮಕ್ಕಳು ಮಾತ್ರ
2. ಕೋವಿಡ್-19 ಕಾರಣದಿಂದಾಗಿ ಇಬ್ಬರೂ ಜೈವಿಕ/ದತ್ತು ಪೋಷಕರನ್ನು ಕಳೆದುಕೊಂಡ ಮಕ್ಕಳು.
3. ಒಬ್ಬ ಜೈವಿಕ/ದತ್ತು ಪೋಷಕರು ಅನ್ಯ ಕಾರಣಗಳಿಂದ ಮರಣ ಹೊಂದಿದ್ದು, ಇನ್ನೊಬ್ಬ ಜೈವಿಕ/ದತ್ತು ಪೋಷಕರನ್ನು ಕೋವಿಡ್-19 ರಿಂದ ಕಳೆದುಕೊಂಡ ಮಕ್ಕಳು.

4. ಕಾನೂನು ಬದ್ಧ ಪೋಷಕರನ್ನು ಕೋವಿಡ್ ನಿಂದಾಗಿ ಕಳೆದುಕೊಂಡ ಮಕ್ಕಳು
5. ಈ ಯೋಜನೆಯ ವ್ಯಾಪ್ತಿಗೆ ಒಳಪಡಲು ಮಕ್ಕಳ ಪೋಷಕರು ಕರ್ನಾಟಕ ರಾಜ್ಯದ ನಿವಾಸಿಗಳಾಗಿರಬೇಕು.

## IV. ಯೋಜನೆಯಡಿ ರಾಜ್ಯ ಸರ್ಕಾರದಿಂದ ಮಗುವಿಗೆ ದೊರಕುವ ಸೌಲಭ್ಯಗಳು:

1. ಪೋಷಕರನ್ನು ಕಳೆದುಕೊಂಡು ವಿಸ್ತೃತ ಕುಟುಂಬದ ಸದಸ್ಯರ ಆರೈಕೆಯಲ್ಲಿರುವ ಮಗುವಿಗೆ 18 ವರ್ಷ ತುಂಬುವವರೆಗೆ ಮಾತ್ರ ಪ್ರತಿ ತಿಂಗಳು ರೂ.3,500/-ಗಳ ಆರ್ಥಿಕ ಧನ ಸಹಾಯವನ್ನು ಮಗು ಮತ್ತು ಮಗುವಿನ ಕಾನೂನು ಬದ್ಧ ಪೋಷಕರ ಜಂಟಿ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು.
2. ಹತ್ತು ವರ್ಷದೊಳಗಿನ ಮಕ್ಕಳ ಪಾಲನೆಗೆ ವಿಸ್ತೃತ ಕುಟುಂಬದ ಸದಸ್ಯರು ಇಲ್ಲದಿದ್ದಲ್ಲಿ ಅಂತಹ ಮಕ್ಕಳನ್ನು ರಕ್ಷಣೆ ಮತ್ತು ಪಾಲನೆಗಾಗಿ ನೋಂದಾಯಿತ ಮಕ್ಕಳ ಪಾಲನಾ ಸಂಸ್ಥೆಗೆ ದಾಖಲಿಸಲಾಗುವುದು.
3. ಮಕ್ಕಳಿಗೆ ರಾಜ್ಯ ಸರ್ಕಾರದ ಸ್ವಾಮ್ಯದ ಮಾದರಿ ವಸತಿ ಶಾಲೆಗಳಲ್ಲಿ ಪ್ರವೇಶಿಸಲು ಯಾವ ತರಗತಿಯಿಂದ ಅವಕಾಶವಿದೆಯೋ ಆ ತರಗತಿಗೆ ಯಾವುದೇ ಪ್ರವೇಶ ಪರೀಕ್ಷೆಗಳಿಲ್ಲದೇ ನೇರವಾಗಿ ಪ್ರವೇಶಾವಕಾಶ ಕಲ್ಪಿಸಿ ಉತ್ತಮ ಗುಣ ಮಟ್ಟದ ಉಚಿತ ಶಿಕ್ಷಣ ನೀಡಲಾಗುವುದು.
4. ಎಸ್.ಎಸ್.ಎಲ್.ಸಿ ಪೂರೈಸಿದ ಮಕ್ಕಳಿಗೆ ಉನ್ನತ ಶಿಕ್ಷಣ ಮತ್ತು ಕೌಶಲ್ಯ ಅಭಿವೃದ್ಧಿಗಾಗಿ ಲ್ಯಾಪ್ ಟಾಪ್ ಅಥವಾ ಟ್ಯಾಬ್ ವಿತರಣೆ ಮಾಡಲಾಗುವುದು.
5. ಕೋವಿಡ್-19 ರಿಂದಾಗಿ ಪೋಷಕರಿಬ್ಬರನ್ನೂ ಕಳೆದುಕೊಂಡ ಹೆಣ್ಣು ಮಗುವಿಗೆ 21 ವರ್ಷ ತುಂಬಿದ ನಂತರ ವಿವಾಹ, ಉನ್ನತ ಶಿಕ್ಷಣ ಹಾಗೂ ಸ್ವಯಂ ಉದ್ಯೋಗದ ಉದ್ದೇಶಗಳಿಗಾಗಿ ತಲಾ ರೂ. 1.00 ಲಕ್ಷ ಆರ್ಥಿಕ ಧನಸಹಾಯ.

## V. ಈ ಯೋಜನೆ ಸೌಲಭ್ಯವನ್ನು ಪಡೆಯಲು ಸಲ್ಲಿಸಬೇಕಾದ ದಾಖಲಾತಿಗಳು:-

1. ನಿಗದಿಪಡಿಸಿರುವ ಅರ್ಜಿ ನಮೂನೆ. ಅರ್ಜಿ ನಮೂನೆಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಛೇರಿಯಿಂದ ಅಥವಾ ಮಕ್ಕಳ ರಕ್ಷಣಾ ನಿರ್ದೇಶನಾಲಯದ Website Link:**icps.karnataka.gov.in**ನಿಂದ

Download ಮಾಡಿಕೊಂಡು ಭರ್ತಿ ಮಾಡಿ ಸೂಕ್ತ ದಾಖಲಾತಿಗಳೊಂದಿಗೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಛೇರಿಗೆ ಸಲ್ಲಿಸಿ ಸ್ವೀಕೃತಿಯನ್ನು ಪಡೆಯುವುದು.

2. ಮಗುವಿನ ಜನನ ಪ್ರಮಾಣ ಪತ್ರದ ದೃಢೀಕೃತ ಪ್ರತಿ, ಜನನ ಪ್ರಮಾಣ ಪತ್ರ ಇಲ್ಲದೇ ಇದ್ದಲ್ಲಿ ಮಗುವಿನ ಜನ್ಮ ದಿನಾಂಕದ ಬಗ್ಗೆ ಸೂಕ್ತ ಪ್ರಾಧಿಕಾರದಿಂದ ಪಡೆದ ದೃಢೀಕರಣ ಪತ್ರ/ಶಾಲಾ ಪ್ರಮಾಣ ಪತ್ರ.
3. ಫಲಾನುಭವಿಯ ಆಧಾರ ಕಾರ್ಡ್ ನ ದೃಢೀಕೃತ ಪ್ರತಿ.
4. ಫಲಾನುಭವಿಯ ವಿದ್ಯಾಭ್ಯಾಸದ ದೃಢೀಕೃತ ಪ್ರತಿ.
5. ಪೋಷಕರು ಕೋವಿಡ್-19ನಿಂದ ಮರಣ ಹೊಂದಿರುವ ಬಗ್ಗೆ ಸರ್ಕಾರದಿಂದ ಪಡೆದ ಕೋವಿಡ್ ಐಡಿ ದಾಖಲಾತಿ ಮತ್ತು ಕೋವಿಡ್-19 ರಿಂದ ಮೃತರಾಗಿರುವ ಬಗ್ಗೆ ಮರಣ ಪ್ರಮಾಣ ಪತ್ರ.
6. ಪರಿಶಿಷ್ಟ ಜಾತಿ ಮತ್ತು ಪಂಗಡದವರಾಗಿದ್ದರೆ ಕಂದಾಯ ಇಲಾಖೆಯಿಂದ ಪಡೆದ ದೃಢೀಕರಣ ಪತ್ರ
7. ಕರ್ನಾಟಕದಲ್ಲಿ ವಾಸವಿದ್ದ ಬಗ್ಗೆ ಕಂದಾಯ ಇಲಾಖೆಯಿಂದ ಪಡೆದ ವಾಸಸ್ಥಳ ದೃಢೀಕರಣ ಪತ್ರ
8. ಮಗುವು ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಅಂಕಪಟ್ಟಿಯ ದೃಢೀಕೃತ ಪ್ರತಿ ಸಲ್ಲಿಸಿದ್ದಲ್ಲಿ ಮಾತ್ರ ಲ್ಯಾಪ್ ಟಾಪ್ /ಟ್ಯಾಬ್ ಪಡೆಯಬಹುದು.
9. ಮದುವೆ ಆಹ್ವಾನ ಪತ್ರಿಕೆ, ಮದುವೆ ನಡೆದ ಸಂದರ್ಭದ ಛಾಯಾಚಿತ್ರ, ಸಬ್ ರಿಜಿಸ್ಟ್ರಾರ್ ಕಛೇರಿಯಿಂದ ವಿವಾಹ ನೋಂದಣಿ ಪ್ರಮಾಣ ಪತ್ರ ಸಲ್ಲಿಸಿದ್ದಲ್ಲಿ ಮಾತ್ರ ಹೆಣ್ಣು ಮಗುವಿಗೆ 21 ವರ್ಷ ತುಂಬಿದ ನಂತರ ಮದುವೆ ಉದ್ದೇಶಕ್ಕೆ ರೂ.1.00 ಲಕ್ಷ ಹಣವನ್ನು ಪಡೆಯಲು ಅವಕಾಶವಿದೆ.
10. ರಾಜ್ಯ ಸರ್ಕಾರ ನಿಗದಿಪಡಿಸುವ ಇನ್ನಿತರೆ ಯಾವುದೇ ದಾಖಲಾತಿಗಳು.

**VI. ಕೋವಿಡ್-19ರಿಂದ ತಂದೆ-ತಾಯಿ ಇಬ್ಬರನ್ನೂ ಕಳೆದುಕೊಂಡ ಮಕ್ಕಳಿಗೆ ಕೇಂದ್ರ ಸರ್ಕಾರದಿಂದ ನೀಡಲಾಗುವ ಎಲ್ಲಾ ಸೌಲಭ್ಯಗಳನ್ನು ಈ ಯೋಜನೆಯ ಫಲಾನುಭವಿಗಳಿಗೆ ನೀಡಲಾಗುವುದು.**

## VII. ಯೋಜನೆಯನ್ನು ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದ ಸಮಿತಿ ರಚನೆ:

ಯೋಜನೆಯನ್ನು ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಮಿತಿಯನ್ನು ಈ ಕೆಳಕಂಡಂತೆ ರಚಿಸಲಾಗಿದೆ.

| | | |
|---|---|---|
| 1. | ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಮ್ಯಾಜಿಸ್ಟ್ರೇಟ್ | ಅಧ್ಯಕ್ಷರು |
| 2. | ಜಿಲ್ಲಾ ವೈದ್ಯಕೀಯ ಮತ್ತು ಆರೋಗ್ಯಾಧಿಕಾರಿಗಳು | ಸದಸ್ಯರು |
| 3. | ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು | ಸದಸ್ಯಕಾರ್ಯದರ್ಶಿ |

- ಸ್ವೀಕೃತ ಅರ್ಜಿಗಳನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪರಿಶೀಲಿಸಿ, ಅರ್ಹ ಫಲಾನುಭವಿಗಳ ಪಟ್ಟಿಯನ್ನು ಜಿಲ್ಲಾ ಮಟ್ಟದ ಸಮಿತಿಗೆ ಸಲ್ಲಿಸುವುದು.
- ಸಮಿತಿಯು ಅರ್ಹ ಫಲಾನುಭವಿಗಳ ಪಟ್ಟಿಯನ್ನು ಅಂತಿಮಗೊಳಿಸಿ ಯೋಜನೆಯನ್ನು ಅನುಷ್ಠಾನಗೊಳಿಸುವುದು.
- ಜಿಲ್ಲಾಮಟ್ಟದ ಸಮಿತಿಯು ಅಂತಿಮಗೊಳಿಸಿದ ಅರ್ಹ ಫಲಾನುಭವಿಗಳಿಗೆ ಅವಶ್ಯವಿರುವ ಅನುದಾನವನ್ನು ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯಡಿಯಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಜಂಟಿ ಖಾತೆಗೆ ಬಿಡುಗಡೆಗೊಳಿಸಲಾಗುವುದು.

ಯೋಜನೆಯ ಮಾರ್ಗಸೂಚಿಯಂತೆ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ಷೇತ್ರಮಟ್ಟದಲ್ಲಿ ಅವಶ್ಯಕ ನಿರ್ಧಾರಗಳನ್ನು ಕೈಗೊಳ್ಳಲು ಸಂಪೂರ್ಣ ಅಧಿಕಾರವನ್ನು ಈ ಸಮಿತಿಗೆ ನೀಡಲಾಗಿದೆ.

## VIII. <u>ಅನುಸರಣೆ ಮತ್ತು ದಾಖಲಾತಿ ನಿರ್ವಹಣೆ :</u>

- ಮಗುವಿನ ಪ್ರಗತಿಯ ಬಗ್ಗೆ ತ್ರೈಮಾಸಿಕವಾಗಿ ಅನುಸರಣೆಯನ್ನು ನಿಯಮಾನುಸಾರ ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ನಿರ್ವಹಿಸತಕ್ಕದ್ದು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಸಂಬಂಧಿಸಿದ ಮಕ್ಕಳ ಕಲ್ಯಾಣ ಸಮಿತಿಗೆ ಮಗುವಿನ ಅನುಸರಣಾ ವರದಿಯನ್ನು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015 ಹಾಗೂ ಮಾದರಿ ನಿಯಮಗಳು-2016ರಂತೆ ಮುಂದಿನ ಅಗತ್ಯ ಕ್ರಮ ಕೈಗೊಳ್ಳುವ ಸಲುವಾಗಿ ಸಲ್ಲಿಸುವುದು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಛೇರಿಯಲ್ಲಿ ಸದರಿ ಮಕ್ಕಳ ಮಗುವಾರು ವೈಯಕ್ತಿಕ ಕಡತವನ್ನು ನಿರ್ವಹಿಸತಕ್ಕದ್ದು. ಅನುಸರಣಾ ವರದಿಗಳನ್ನು ಈ ಕಡತಗಳಲ್ಲಿ ನಿರ್ವಹಿಸತಕ್ಕದ್ದು.